**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 481 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03-06-2017.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತಿಗಳು,

**ವಿಷಯ:-** ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ, ದರ ಮತ್ತು ಫೀಜುಗಳನ್ನು ಪರಿಷ್ಕರಿಸಿ ವಿಧಿಸುವ ಬಗ್ಗೆ.

* * *

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ 199ನೇ ಪ್ರಕರಣದ IVನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಪಂಚಾಯಿತಿ ಪ್ರದೇಶದ ಪರಿಮಿತಿಗಳೊಳಗಿರುವ, ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ತೆರಿಗೆ ವಿಧಿಸುವ ಬಗ್ಗೆ ಚರ್ಚಿಸಲು, **ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ದಿನಾಂಕ:09.06.2017 ರಂದು ಬೆಳಿಗ್ಗೆ 11.00ಗಂಟೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಸಭಾಂಗಣ, ಕೆಂಪೇಗೌಡ ರಸ್ತೆ, ಬೆಂಗಳೂರು** ಇಲ್ಲಿ ಸಭೆ ನಡೆಸಲು ತೀರ್ಮಾನಿಸಲಾಗಿದೆ.

ಆದುದರಿಂದ ಸದರಿ ಸಭೆಗೆ, ಸಂಬಂಧಿಸಿದ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು **ತಮ್ಮ ಜಿಲ್ಲೆಯಿಂದ ಒಬ್ಬರಂತೆ ಪರಿಣಿತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು** ಈ ಕೆಳಕಂಡ ಮಾಹಿತಿಗಳೊಂದಿಗೆ ಸಭೆಗೆ ನಿಯೋಜಿಸಲು ಕ್ರಮವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ಹೆಚ್ಚಿನ ಮಾಹಿತಿ ಬೇಕಾದಲ್ಲಿ, ಶ್ರೀ. ಕೆ.ಜಿ. ಜಗದೀಶ್, ಸಹಾಯಕ ಯೋಜನಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು (ಮೊಬೈಲ್ ಸಂಖ್ಯೆ: 9900299000) ಇವರನ್ನು ಸಂಪರ್ಕಿಸಬಹುದಾಗಿದೆ.

**ಸಭೆಯಲ್ಲಿ ಹಾಜರುಪಡಿಸಬೇಕಾಗಿರುವ ವಿವರಗಳು;-**

1. ಕರ್ನಾಟಕ ಸ್ಟ್ಯಾಂಪ್ ಅಧಿನಿಯಮ 1957ರ 45ಬಿ ಪ್ರಕರಣದ ಅಡಿಯಲ್ಲಿ ಪ್ರಕಟಿಸಲಾದ ಮಾರ್ಗಸೂಚಿ ಮಾರುಕಟ್ಟೆ ಮೌಲ್ಯದಂತೆ ಅನುಬಂಧದಲ್ಲಿರುವಂತೆ ನಿಗದಿಪಡಿಸಲಾಗಿರುವ ಪ್ರತಿ ಜಿಲ್ಲೆಯ ಕನಿಷ್ಠ ಮತ್ತು ಗರಿಷ್ಠ ಮಾರ್ಗಸೂಚಿ ದರಗಳ ವಿವರ.
2. ಆಸ್ತಿ ತೆರಿಗೆಯಲ್ಲಿ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ತೆರಿಗೆ ವಿಧಿಸುವಲ್ಲಿ ಸುಧಾರಣೆ ತರಲು ಸೂಚಿಸಬಹುದಾದ ಸಲಹೆಗಳು
3. ಹಾಲಿ ಇರುವ ಆಸ್ತಿ ತೆರಿಗೆ ನೀತಿಗಳನ್ನು ರಕ್ಷಿಸುವ ಸಲುವಾಗಿ ಕನಿಷ್ಠ ಹಾಗೂ ಗರಿಷ್ಠ ತೆರಿಗೆ ದರದಲ್ಲಿ ನಿಯಮಿಸಬಹುದಾದ ತೆರಿಗೆ ಪದ್ಧತಿಯ ಬಗ್ಗೆ ಸೂಚಿಸಬಹುದಾದ ಸಲಹೆಗಳು
4. ಘಟಕ ಪ್ರದೇಶ ಮೌಲ್ಯ (Unit Area Value)ವಾರು ತೆರಿಗೆಯ ದರ ನಿರ್ಧರಣೆಗೆ ಸೂಚಿಸಬಹುದಾದ ಸಲಹೆಗಳು
5. ಹಾಲಿ ಇರುವ ಆಸ್ತಿ ತೆರಿಗೆ ನೀತಿಯಲ್ಲಿ ಸ್ಥಳೀಯ ಸಂಸ್ಥೆಗಳು ಆದಾಯವನ್ನು ಹೆಚ್ಚಿಸಿಕೊಳ್ಳಬುದಾದ ಸಲಹೆಗಳು
6. ಚರ್ಚಿಸಬಹುದಾದ ಇತರೆ ವಿಷಯಗಳು.

ತಮ್ಮ ವಿಶ್ವಾಸಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ,
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.